**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : ಗುಲ್ಬರ್ಗಾ ಜಿಲ್ಲೆ ಅಳಂದ ತಾಲ್ಲೂಕಿನ ಶುಕ್ರವಾಡಿ ಗ್ರಾಮದಲ್ಲಿ ಕೇಂದ್ರೀಕೃತ ಸಂಪೂರ್ಣ ಬೀದಿ ದೀಪಗಳನ್ನು ಅಳವಡಿಸಲು ಮಂಜೂರಾತಿ ನೀಡುವ – ಬಗ್ಗೆ.

ಓದಲಾಗಿದೆ : ಸರ್ಕಾರಿ ಪತ್ರ ಸಂಖ್ಯೆ: ಗ್ರಾಅಪ/22/ಜೈಅಯೋ/2014(ಪಿ) ದಿನಾಂಕ 25.09.2014

*****

**ಪ್ರಸ್ತಾವನೆ-:**

2014–15ನೇ ಸಾಲಿನ ಆಯವ್ಯಯದಲ್ಲಿ ಸೌರ ಬೆಳಕು ಯೋಜನೆಯಲ್ಲಿ ಆಯ್ದ ಗ್ರಾಮ ಪಂಚಾಯಿತಿಗಳಲ್ಲಿ ಸೌರ ಬೀದಿ ದೀಪಗಳ ಅಳವಡಿಸುವ ಕಾರ್ಯಕ್ಕೆ ಓದಲಾದ ಸರ್ಕಾರಿ ಪತ್ರದಲ್ಲಿ ಈ ಯೋಜನೆಯನ್ನು ಕೇಂದ್ರೀಕೃತ ಸೌರ ವಿದ್ಯುತ್ ಘಟಕ ಅಳವಡಿಸುವ ಕಾರ್ಯಕ್ಕೆ ಮಾರ್ಗಸೂಚಿಯನ್ನು ನೀಡಲಾಗಿದೆ. ಅದರಂತೆ 2014–15ನೇ ಸಾಲಿನಲ್ಲಿ ಗುಲ್ಬರ್ಗಾ ಜಿಲ್ಲೆ ಅಳಂದ ತಾಲ್ಲೂಕಿನ ಶುಕ್ರವಾಡಿ ಗ್ರಾಮದಲ್ಲಿ ಕೇಂದ್ರೀಕೃತ ಸೌರ ಬೀದಿ ದೀಪ ಘಟಕಗಳನ್ನು ಇ-ಟೆಂಡರ್ ಮೂಲಕ ಅಳವಡಿಸಲು ಸರ್ಕಾರವು ತೀರ್ಮಾನಿಸಿದೆ ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ/22/ಜೈಅಯೋ/2014(ಪಿ) ಬೆಂಗಳೂರು, ದಿನಾಂಕ 30.09.2014**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ 2014–15ನೇ ಸಾಲಿನಲ್ಲಿ ಗುಲ್ಬರ್ಗಾ ಜಿಲ್ಲೆ ಅಳಂದ ತಾಲ್ಲೂಕಿನ ಶುಕ್ರವಾಡಿ ಗ್ರಾಮದಲ್ಲಿ ಕೇಂದ್ರೀಕೃತ ಸೌರ ವಿದ್ಯುತ್ ಘಟಕ ಸ್ಥಾಪಿಸಿ, ಸಂಪೂರ್ಣ ಸೌರ ಬೀದಿ ದೀಪಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ನೂತನ ಸೌರ ಬೆಳಕು ಯೋಜನೆಯನ್ವಯ ಲೆಕ್ಕ ಶೀರ್ಷಿಕೆ 2810–00–101–0–91 (2810–01–198–1–01)ಯೋಜನೆ ಅಡಿಯಲ್ಲಿ ₹ 15.00 ಲಕ್ಷಗಳ (ರೂ. ಹದಿನೈದು ಲಕ್ಷಗಳು ಮಾತ್ರ) ಅನುದಾನ ವೆಚ್ಚದಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಅನುಷ್ಠಾನಿಸಲು ಆಡಳಿತಾತ್ಮಕ ಅನುಮೋದನೆ ಮತ್ತು ಮಂಜೂರಾತಿ ನೀಡಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗುಲ್ಬರ್ಗಾರವರು ನೂತನ ಸೌರ ಬೆಳಕು ಯೋಜನೆಯ 2014–15ನೇ ಸಾಲಿನ ಮಾರ್ಗಸೂಚಿಯನ್ವಯ ಇ-ಟೆಂಡರ್ ಮೂಲಕ ಗುಲ್ಬರ್ಗಾ ಜಿಲ್ಲೆ ಅಳಂದ ತಾಲ್ಲೂಕಿನ ಶುಕ್ರವಾಡಿ ಗ್ರಾಮದಲ್ಲಿ ಅನುಷ್ಠಾನಗೊಳಿಸತಕ್ಕದ್ದು.

ಸೌರ ಬೀದಿ ದೀಪಗಳ ಅನುಷ್ಠಾನದ ಬಗ್ಗೆ ತುರ್ತಾಗಿ ನಿಯಮಾನುಸಾರ ಪ್ರಕ್ರಿಯೆಯನ್ನು ಪ್ರಾರಂಭಿಸಿ, ಅನುದಾನ ಬಿಡುಗಡೆಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30/9/14

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗುಲ್ಬರ್ಗಾ ಜಿಲ್ಲೆ.

3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ, ನಂ. 39, ಶಾಂತಿ ಗೃಹ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು–01
4. ಜಿಲ್ಲಾ ಖಜಾನಾಧಿಕಾರಿಗಳು, ಗುಲ್ಬರ್ಗಾ ಜಿಲ್ಲೆ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ – ಮಾಹಿತಿಗಾಗಿ ಮತ್ತು ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.